ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ಯವರ ನ್ಯಾಯಾಲಯ, ಚಾಮರಾಜನಗರ .

ಸಿಸಿ. **850/2014**

| | | | |
|---|---|---|---|
| ಸಾಕ್ಷಿದಾರರು ಹೆಸರು | : | ರಾಮಕೃಷ್ಣ | ದಿನಾಂಕಃ **13.11.2024**ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಲಾಯಿತು. |
| ತಂದೆಯ ಹೆಸರು | : | ಲೇಟ್ ಚಿಕ್ಕಮಾದಯ್ಯ | |
| ವಯಸ್ಸು | : | **63** ವರ್ಷ | |
| ಉದ್ಯೋಗ | : | ನಿವೃತ್ತ ಎ ಎಸ್ ಐ | **CW-18** |
| ವಾಸಸ್ಥಳ | : | ಗುಂಡ್ಲುಪೇಟೆ | **PW-6** |

ಮುಖ್ಯ ವಿಚಾರಣೆ : ಮಾನ್ಯ ಎಪಿಪಿರವರಿಂದಃ

ನಾನು 2013 ರಿಂದ 2017 ರವರೆಗೆ ಚಾಮರಾಜನಗರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 08.02.2014 ರಂದು ರಾತ್ರಿ 10.15 ಗಂಟೆ ಸಮಯದಲ್ಲಿ ನಾನು ಠಾಣಾ ಉಸ್ತುವಾರಿಯಲ್ಲಿದ್ದಾಗ ಚಾಮರಾಜನಗರ ಜಿಲ್ಲಾ ಸರ್ಕಾರಿ ಆಸ್ಪತ್ರೆಯಿಂದ ಮೇಮೋ ಬಂದಿದ್ದು ಅದರಂತೆ ನಾನು ಜಿಲ್ಲಾ ಆಸ್ಪತ್ರೆಗೆ ಹೋಗಿ ವಿಚಾರಿಸಿದಾಗ ಮಹದೇವಸ್ವಾಮಿ ಎಂಬುವರು ಅಪಘಾತಕ್ಕೆ ಒಳಗಾಗಿ ಆಸ್ಪತ್ರೆಯಲ್ಲಿ ದಾಖಲಾಗಿರುವ ಬಗ್ಗೆ ತಿಳಿದುಬಂತು. ನಂತರ ಸದರಿ ಮಹದೇವಸ್ವಾಮಿಯವರನ್ನು ವಿಚಾರಿಸಿದಾಗ ಅವರು ಒಂದು ಲಿಖಿತ ದೂರನ್ನು ನೀಡಿದ್ದು ಅದನ್ನು ಸ್ವೀಕರಿಸಿ ಠಾಣೆಗೆ ವಾಪಸ್ಸಾಗಿ ಠಾಣಾ ಮೊಕದ್ದಮೆ ಸಂಖ್ಯೆ.38/2014 ರಂತೆ ಪ್ರಕರಣ ದಾಖಲಿಸಿ ಪ್ರ.ವ.ವರದಿಯನ್ನು ಮಾನ್ಯ ಘನ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಸಲ್ಲಿಸಿರುತ್ತೇನೆ.

ಸಾಕ್ಷಿ ನಿಪಿಃ4 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿಃ4(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಪ್ರ.ವ.ವರದಿಯನ್ನು ನೋಡಿ ಅದರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಯನ್ನು ನಿಪಿಃ 7 ಎಂದು, ಸಾಕ್ಷಿ ಸಹಿಯನ್ನು ನಿಪಿಃ7(ಎ) ಎಂದು ಗುರುತಿಸಲಾಯಿತು. ದಿಃ09.02.2014 ರಂದು ಚಾಸಾ 3 ರವರು ಠಾಣೆಗೆ ಬಂದು ಚಿಕಿತ್ಸೆ ಪಡೆಯುತ್ತಿದ್ದ ಅಪ್ಪಾಜಿ ಎಂಬುವರು ಮೃತಪಟ್ಟಿರುತ್ತಾರೆ ಎಂದು ದೂರನ್ನು ನೀಡಿರುತ್ತಾರೆ. ನಂತರ ಸದರಿ ದೂರಿನ ಆದಾರದ ಮೇಲೆ ಪ್ರಕರಣದಲ್ಲಿ ಹೆಚ್ಚುವರಿಯಾಗಿ ಭಾರತೀಯ ದಂಡ ಸಂಹಿತೆ ಕಲಂ 304(ಎ)ಯನ್ನು ಸೇರ್ಪಡೆ ಮಾಡಿ ತನಿಖೆ ಮುಂದುವರೆಸಲು ಅನುಮತಿ ಕೋರಿ ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿ ನಿಪಿಃ6 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿಃ6(ಬಿ ) ಎಂದು ಗುರುತಿಸಲಾಯಿತು. ಸಾಕ್ಷಿ ದಿಃ09.12.2013 ರ ನಿವೇದನೆಯನ್ನು ನೋಡಿ ಅದರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಯನ್ನು ನಿಪಿ 8 ಎಂದು, ಸಾಕ್ಷಿಯ ಸಹಿಯನ್ನು ನಿಪಿ8(ಎ) ಎಂದು ಗುರುತಿಸಲಾಯಿತು. ಸಾಕ್ಷಿ

ಮುಂದುವರೆದು ನಿಪಿ 8 ರಲ್ಲಿ ಕಣ್ತಪ್ಪಿನಿಂದ ದಿಃ 09.12.2013 ಎಂದು ನಮೂದಾಗಿದ್ದು ಸದರಿ ನಿವೇದನೆಯನ್ನು ದಿಃ 09.02.2014 ರಂದು ಸಲ್ಲಿಸಲಾಗಿರುತ್ತದೆ ಎಂದು ನುಡಿಯುತ್ತಾರೆ. ಮುಂದಿನ ತನಿಖೆಯನ್ನು ಚಾಸಾ 17 ರವರಿಗೆ ಹಸ್ತಾಂತರಿಸಿರುತ್ತೇನೆ.

ಪಾಟೀಸವಾಲುಃ ಆರೋಪಿ ಪರ ಶ್ರೀ ಜಿ ಎಸ್ ಕೆ ವಕೀಲರಿಂದಃ

ಮಹದೇವಸ್ವಾಮಿಯವರಿಗೆ ಓದಲು ಬರೆಯಲು ಬರುತ್ತದೋ ಇಲ್ಲವೋ ಎಂಬ ಬಗ್ಗೆ ನಾನು ತಿಳಿದುಕೊಳ್ಳಲಿಲ್ಲ. ನಿಪಿ **4** ದೂರನ್ನು ಯಾರ ಕೈಬರವಣಿಗೆಯಲ್ಲಿ ಬರೆದಿದೆ ಎಂಬುದನ್ನು ನಾನು ತಿಳಿದುಕೊಳ್ಳಲಿಲ್ಲ. ನಿಪಿ **4** ಮತ್ತು **6** ರಲ್ಲಿ ಆರೋಪಿ ಹೆಸರನ್ನು ನಮೂದು ಮಾಡಿಲ್ಲ ಎಂದರೆ ಸರಿ . ಸದರಿ ವಾಹನದ ಚಾಲಕರು ಯಾರು ಎಂದು ನನಗೆ ಗೊತ್ತಿಲ್ಲ. ನಿಪಿ**6** ದೂರನ್ನು ಯಾರ ಕೈಬರವಣಿಗೆಯಲ್ಲಿ ಬರೆದಿದೆ ಎಂಬುದನ್ನು ನಾನು ತಿಳಿದುಕೊಳ್ಳಲಿಲ್ಲ. ನಿಪಿ **4** ಮತ್ತು **6** ನ್ನು ಈ ಪ್ರಕರಣಕ್ಕಾಗಿ ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನಿಪಿ **4** ಮತ್ತು **6** ರಲ್ಲಿ ಹೇಳಿರುವ ವಾಹನಕ್ಕೂ ಈ ಕೇಸಿಗೂ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಸುಳ್ಳು ದೂರನ್ನು ಪಡೆದು ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಈ ಕೇಸಿಗೆ ಅನುಕೂಲವಾಗಲೀ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ : ಇಲ್ಲಾ.

(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೇ ಸ ಇ ಒ.,

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ಚಾಮರಾಜನಗರ.